ಸಾರ್ವಜನಿಕ ಶಿಕ್ಷಣ ಇಲಾಖೆ

# ಆಯುಕ್ತರ ಕಛೇರಿ, ಹೊಸ ಸಾರ್ವಜನಿಕ ಕಛೇರಿಗಳು, ನೃಪತುಂಗ ರಸ್ತೆ, ಬೆಂಗಳೂರು - 1

ಕಡತ ಸಂಖ್ಯೆ: ಯೋ8/ಶೌಚಾಲಯ ಕೊರತೆ ದೂರು–01/2019–20 ದಿನಾಂಕ: 04–07–2019

## : ಅಧಿಕೃತ ಜ್ಞಾಪನ :

ವಿಷಯ: ಉದಯವಾಣಿ ದಿನಪತ್ರಿಕೆಯಲ್ಲಿ ದಿನಾಂಕ: 09/5/2019 ರಂದು "4 ಸಾವಿರ ಶಾಲೆಗಳಲ್ಲಿ ಬಯಲೇ ಶೌಚ" ಎಂಬ ಶೀರ್ಷಿಕೆಯಡಿ ಪ್ರಕಟವಾದ ಪತ್ರಿಕಾ ವರದಿಯ ಬಗ್ಗೆ :

ಉಲ್ಲೇಖ: ಸರ್ಕಾರದ ಪತ್ರ ಸಂಖ್ಯೆ: ಇಪಿ 15 ಯೋಸಕ 2019 ದಿನಾಂಕ:: 06/06/2019

* * * * *

ವಿಷಯಕ್ಕೆ ಸಂಬಂಧಿಸಿದಂತೆ, ಉದಯವಾಣಿ ದಿನಪತ್ರಿಕೆಯಲ್ಲಿ ರಾಜ್ಯದ ಸುಮಾರು ನಾಲ್ಕು ಸಾವಿರ ಶಾಲೆಗಳಲ್ಲಿ ಇಂದಿಗೂ ಬಯಲೇ ಶೌಚಾಲಯ.....! ಎಂಬ ಶೀರ್ಷಿಕೆಯಡಿಯಲ್ಲಿ ವಿಸ್ತೃತವಾದ ವರದಿ ಪ್ರಕಟವಾಗಿದ್ದು ಇದು ನಿಜಕ್ಕೂ ಆಘಾತಕಾರಿ ವಿಚಾರವಾಗಿದೆ. ಮಾಧ್ಯಮದವರ ಸಮೀಕ್ಷೆಗಳ ಪ್ರಕಾರ ರಾಜ್ಯದ ಸುಮಾರು 43492 ಸರ್ಕಾರಿ ಪ್ರಾಥಮಿಕ ಶಾಲೆಗಳ ಪೈಕಿ 2794 ಶಾಲೆಗಳಲ್ಲಿ ಬಾಲಕರಿಗೆ ಹಾಗೂ 1288 ಶಾಲೆಗಳಲ್ಲಿ ಬಾಲಕಿಯರಿಗೆ ಪ್ರತ್ಯೇಕವಾದ ಶೌಚಾಲಯಗಳೇ ಇಲ್ಲ. 4696 ಪ್ರೌಢಶಾಲೆಗಳ ಪೈಕಿ 153 ಶಾಲೆಗಳಲ್ಲಿ ಬಾಲಕರಿಗೆ ಹಾಗೂ 64 ಶಾಲೆಗಳಲ್ಲಿ ಬಾಲಕಿಯರಿಗೆ ಶೌಚಾಲಯಗಳಿಲ್ಲ. ಈ ಹಿನ್ನೆಲೆಯಲ್ಲಿ ಶಾಲೆಗಳಲ್ಲಿ ಶೌಚಾಲಯಗಳ ಕೊರತೆ ಇರುವುದರಿಂದ ಮಕ್ಕಳು ಬಯಲನ್ನೇ ಅವಲಂಭಿಸುವ ಪರಿಸ್ಥಿತಿ ಉದ್ಭವವಾಗಿರುವ ಅಂಶ ತೀರಾ ಆತಂಕಕಾರಿ.

ಪತ್ರಿಕೆಯಲ್ಲಿ ಪ್ರಕಟವಾದ ವರದಿಯನ್ನು ಮಾನ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿಯವರು ಬಹಳ ಗಂಭೀರವಾಗಿ ಪರಿಗಣಿಸಿರುತ್ತಾರೆ. ದಿನಾಂಕ: 30/9/2019 ರ ಒಳಗಾಗಿ ಎಲ್ಲಾ 2794+1288+153+64 ಶಾಲೆಗಳಲ್ಲಿ ಶೌಚಾಲಯ ನಿರ್ಮಿಸಲು ನರೇಗಾ ಯೋಜನೆಯಡಿಯಲ್ಲಿ ಅಭಿಯಾನ ಕೈಗೊಳ್ಳುವಂತೆ ದಿನಾಂಕ: 1/10/2019 ಕ್ಕೆ ಎಲ್ಲಾ ಸರ್ಕಾರಿ ಶಾಲೆಗಳಲ್ಲಿ ಕಡ್ಡಾಯವಾಗಿ ಶೇ 100% ಶೌಚಾಲಯಗಳನ್ನು ಹೊಂದಿರಲೇ ಬೇಕು ಎಂದು ಆದೇಶಹೊರಡಿಸಿರುತ್ತಾರೆ.

2018 ರ ವಿಧಾನಸಭಾ ಚುನಾವಣೆಯಲ್ಲಿ ಹಾಗೂ 2019 ರ ಲೋಕಸಭಾ ಚುನಾವಣೆಯಲ್ಲಿ ರಾಜ್ಯದ ಸರ್ಕಾರಿ(ಮತಗಟ್ಟೆಗಳೆಂದು ಗುರುತಿಸಿರುವ) ಶಾಲೆಗಳಲ್ಲಿ ಅಗತ್ಯ ಮೂಲಭೂತ ಸೌಕರ್ಯಗಳಲ್ಲಿ ಒಂದಾದ ಶೌಚಾಲಯಗಳನ್ನು ಒದಗಿಸಲು ಅನುದಾನ ಬಿಡುಗಡೆಗೊಳಿಸಲಾಗಿತ್ತು. ಬಹುತೇಕ ಸರ್ಕಾರಿ ಶಾಲೆಗಳು ಶೌಚಾಲಯಗಳನ್ನು ಹೊಂದಿರುತ್ತದೆ ಎಂದು ಭಾವಿಸಲಾಗಿದೆ. ಆದರೂ ಪ್ರತೀ ವರ್ಷ ಸರ್ಕಾರಿ ಶಾಲೆಗಳಲ್ಲಿ ಕುಡಿಯುವ ನೀರು ಮತ್ತು ಶೌಚಾಲಗಳ ನಿರ್ವಹಣೆಗಾಗಿ ಅನುದಾನವನ್ನು ಆಯಾ ಶಾಲೆಗಳ ಮುಖ್ಯೋಪಾಧ್ಯಾಯರ ಖಾತೆಗಳಿಗೆ ಎಲ್ಲಾ ಕ್ಷೇತ್ರಶಿಕ್ಷಣಾಧಿಕಾರಿಗಳು ಜಮೆ ಮಾಡಿರುತ್ತಾರೆ.

ಆದರೆ 4000 ಶಾಲೆಗಳಲ್ಲಿ ಶೌಚಾಲಯಗಳೇ ಇಲ್ಲದ ಮೇಲೆ ಈಗಾಗಲೇ ಶೌಚಾಲಯ ನಿರ್ವಹಣೆಗಾಗಿ ಬಿಡುಗಡೆಗೊಳಿಸಲಾಗಿರುವ ಅನುದಾನ ಬಳಕೆಯಾಗಿಲ್ಲದಿದ್ದಲ್ಲಿ ಹಣವನ್ನು ಸರ್ಕಾರಕ್ಕೆ ಹಿಂದಿರುಗಿಸಬೇಕಾಗುತ್ತದೆ. ಈ ಹಿನ್ನೆಲೆಯಲ್ಲಿ ರಾಜ್ಯದ ಎಲ್ಲಾ ಉಪನಿರ್ದೇಶಕರು(ಆಡಳಿತ) ಇವರುಗಳು ತಮ್ಮ ಆಡಳಿತ ವ್ಯಾಪ್ತಿಯ ಎಲ್ಲಾ ಸರ್ಕಾರಿ ಶಾಲೆಗಳ ವಾಟ್ಸಾಪ್ ಗ್ರೂಪ್ ರಚಿಸಿ ಪ್ರತಿವಾರವೂ ಸಮಿಕ್ಷೆ ನಡೆಸಿ ಶೌಚಾಲಯಗಳಿಲ್ಲದ ಶಾಲೆಗಳ ಪಟ್ಟಿಯನ್ನು ಸಿದ್ದಪಡಿಸಿ ದೃಢಿಕೃತ ಪ್ರತಿಯನ್ನು ಈ ಕಛೇರಿಗೆ ಕಳುಹಿಸಲು ಕೋರಿದೆ. ಮಾನ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿಗಳ ಸೂಚನೆ ಪತ್ರವನ್ನು ಲಗತ್ತಿಸಿ ಕಳುಹಿಸುತ್ತಾ ಎಲ್ಲಾ ಸರ್ಕಾರಿ ಶಾಲೆಗಳು ಕಡ್ಡಾಯವಾಗಿ ಶೌಚಾಲಯವನ್ನು ಹೊಂದಿರುವಂತೆ ಕ್ರಮವಹಿಸಲು ತಿಳಿಸಿದೆ.

ಮಕ್ಕಳ ದಾಖಲಾತಿಗೆ ಅನುಗುಣವಾಗಿ ಪ್ರಸ್ತುತ ಇರುವ ಶೌಚಾಲಯದ ಲಭ್ಯತೆ ಹಾಗೂ ಮಕ್ಕಳ ದಾಖಲಾತಿಗೆ ಅನುಗುಣವಾಗಿ ಹೆಚ್ಚುವರಿ ಶೌಚಾಲಯದ ಅಗತ್ಯತೆ ಇದ್ದಲ್ಲಿ ಮಾತ್ರ ಅಂದಾಜು ಮೊತ್ತದ ಕ್ರಿಯಾ ಯೋಜನೆಯನ್ನು ಸ್ಪಷ್ಟ ಅಭಿಪ್ರಾದೊಂದಿಗೆ ಪೂರಕ ದಾಖಲೆಗಳ ಸಹಿತ ಜಿಲ್ಲಾಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳಿಗೆ ಪ್ರಸ್ತಾವನೆಯನ್ನು ಸಲ್ಲಿಸಿ ಜಿಲ್ಲಾಪಂಚಾಯತ್ ಅಥವಾ ಮಹಾತ್ಮಾಗಾಂಧಿ ನರೇಗಾ ಯೋಜನೆಯಡಿಯಲ್ಲಿ ಲಭ್ಯವಿರುವ ಅನುದಾನದಿಂದ ಜಿಲ್ಲಾ ಹಂತದಲ್ಲೇ ನಿಯಮಾನುಸಾರ ಅಗತ್ಯತೆ ಇದ್ದಲ್ಲಿ ಮಾತ್ರ ಶೌಚಾಲಯ ನಿರ್ಮಾಣ ಕಾಮಗಾರಿಗಳನ್ನು ಕೈಗೊಳ್ಳಲು ಅಗತ್ಯ ಕ್ರಮವಹಿಸುವಂತೆ ತಿಳಿಸಿದೆ.

ಜಿಲ್ಲಾ ವ್ಯಾಪ್ತಿಯ ಸಮೀಕ್ಷೆಯ ವರದಿಯನ್ನು ಅಂಕಿ-ಅಂಶಗಳು ಹಾಗೂ ಶಾಲೆಗಳ ಪಟ್ಟಿಸಹಿತ (ವಿಧಾನಸಭಾ ಕ್ಷೇತ್ರವಾರು) ವಿವರಗಳನ್ನು ದಿನಾಂಕ: 30/08/2019 ರ ಒಳಗಾಗಿ ಹಾಗೂ ದಿನಾಂಕ: 01/10/2019 ರಂದು "**ನಮ್ಮ ಜಿಲ್ಲೆಯಲ್ಲಿ ಶೌಚಾಲಯ ರಹಿತ ಶಾಲೆಗಳು ಯಾವುದೂ ಇರುವುದಿಲ್ಲ, ಎಲ್ಲಾ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲೆಗಳು ಶೌಚಾಲಯವನ್ನು ಹೊಂದಿದೆ**" ಎಂಬ ಬಗ್ಗೆ ಆಯಾ ಜಿಲ್ಲೆಯ ಉಪನಿರ್ದೇಶಕರು(ಆಡಳಿತ) ಇವರು ದೃಢೀಕೃತ ಪತ್ರವನ್ನು ಉಪನಿರ್ದೇಶಕರು(ಯೋಜನೆ) ಆಯುಕ್ತರ ಕಛೇರಿ, ಬೆಂಗಳೂರು ಇವರಿಗೆ ಕಳುಹಿಸಲು ಸೂಚಿಸಿದೆ. ಈ ಬಗ್ಗೆ ಸರ್ಕಾರಕ್ಕೆ ಹಾಗೂ ಸರ್ಕಾರದ ಮುಖ್ಯ ಕಾರ್ಯದರ್ಶಿಗಳಿಗೆ ವರದಿ ಮಾಡಬೇಕಾಗಿರುವುದರಿಂದ ಯಾವುದೇ ವಿಳಂಬಕ್ಕೆ ಆಸ್ಪದವಿಲ್ಲದಂತೆ ಮೇಲೆ ವಿವರಿಸಲಾದ ಸೂಚನೆಗಳನ್ನು ಕಟ್ಟುನಿಟ್ಟಾಗಿ ಪಾಲಿಸಲು ಸೂಚಿಸಿದೆ. ತದನಂತರ ಶೌಚಾಲಯ ರಹಿತ ಶಾಲೆಗಳ ಬಗ್ಗೆ ಮಾಧ್ಯಮದಲ್ಲಿ ಅಥವಾ ಸಾರ್ವಜನಿಕರಿಂದ ದೂರುಗಳು ಬಂದಲ್ಲಿ ಅಂತಹಾ ಉಪನಿರ್ದೇಶಕರು(ಆಡಳಿತ) ಇವರುಗಳನ್ನೇ ನೇರ ಹೊಣೆಗಾರರನ್ನಾಗಿ ಮಾಡಿ ಅಂತಹಾ ಉಪನಿರ್ದೇಶಕರ ವಿರುದ್ದ ಕರ್ತವ್ಯ ನಿರ್ಲಕ್ಷತೆ ಎಂದು ಪರಿಗಣಿಸಿ ನಿಯಮಾನುಸಾರ ಶಿಸ್ತು ಕ್ರಮಕೈಗೊಳ್ಳಲು ಸರ್ಕಾರಕ್ಕೆ ಶಿಫಾರಸ್ಸು ಮಾಡಲಾಗುವುದು.

**ಆಯುಕ್ತರು**
ಸಾರ್ವಜನಿಕ ಶಿಕ್ಷಣ ಇಲಾಖೆ
ಬೆಂಗಳೂರು.

ಇವರಿಗೆ
ರಾಜ್ಯದ ಎಲ್ಲಾ ಉಪನಿರ್ದೇಶಕರು(ಆಡಳಿತ) ಸಾರ್ವಜನಿಕ ಶಿಕ್ಷಣ ಇಲಾಖೆ, ಇವರುಗಳಿಗೆ ತುರ್ತು ಕ್ರಮಕ್ಕಾಗಿ ಕಳುಹಿಸಿದೆ.

ಪ್ರತಿಯನ್ನು ಮಾಹಿತಿಗಾಗಿ:

1. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ, ಬಹುಮಹಡಿಗಳ ಕಟ್ಟಡ, 6ನೇ ಮಹಡಿ, ಬೆಂಗಳೂರು.
2. ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳು ಇವರುಗಳಿಗೆ ಮಾಹಿತಿಗಾಗಿ ಕಳುಹಿಸಿದೆ.
3. ರಾಜ್ಯದ ಎಲ್ಲಾ ಜಿಲ್ಲಾಪಂಚಾಯತ್, ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು ಇವರುಗಳಿಗೆ ಅಗತ್ಯ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
4. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ ಮತ್ತು ಕಲಬುರಗಿ ರವರ ಅಗತ್ಯ ಮಾಹಿತಿಗಾಗಿ.
5. ರಾಜ್ಯದ ಎಲ್ಲಾ ಕ್ಷೇತ್ರಶಿಕ್ಷಣಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ, ಇವರುಗಳಿಗೆ (ಜ್ಞಾಪನದ ಪ್ರತಿಯನ್ನು ಉಪನಿರ್ದೇಶಕರ ಮೂಲಕ)